ಸರ್ಕಾರದಿಂದ ಅನುಮತಿ ಪಡೆಯದೆ ಖಾಸಗಿ ಸಂಘ ಸಂಸ್ಥೆಗಳ ನೇತೃತ್ವದಲ್ಲಿ ನಡೆಸುತ್ತಿರುವ ವಿದ್ಯಾರ್ಥಿನಿಲಯಗಳು ನಿಖರವಾಗಿ ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ. ವಿದ್ಯಾರ್ಥಿನಿಲಯಗಳು ತಮ್ಮ ಆರ್ಥಿಕ ಮೂಲಗಳಿಂದ ಸಮಾಜದ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ನಡೆಸುತ್ತಿದ್ದು, ಅವುಗಳ ದಾಖಲಾತಿ ನಿರ್ವಹಣೆ ಕುರಿತ ಯಾವುದೇ ಮಾಹಿತಿ ಇಲಾಖೆಯಲ್ಲಿ ಲಭ್ಯವಿಲ್ಲ. ಅವುಗಳು ಇಲಾಖೆಯ ನಿಯಂತ್ರಣಕ್ಕೆ ಒಳಪಟ್ಟಿರುವುದಿಲ್ಲ.

ಇ) ಇವುಗಳಲ್ಲಿ 11 ಮೆಟ್ರಿಕ್ ಪೂರ್ವ ಹಾಗೂ 1 ಮೆಟ್ರಿಕ್ ನಂತರದ ಅನುದಾನಿತ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಸರ್ಕಾರದಿಂದ ಅನುಮತಿ ನೀಡಲಾಗಿರುತ್ತದೆ.

ಈ) ಇಲಾಖೆಯಿಂದ ಮಾನ್ಯತೆಗೊಂಡು ಸರ್ಕಾರಿ ಅನುದಾನದಿಂದ ನಡೆಸಲ್ಪಡುವ ಖಾಸಗಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಕಾಲ ಕಾಲಕ್ಕೆ ತಪಾಸಣೆ ನಡೆಸಿ, ವಿದ್ಯಾರ್ಥಿನಿಲಯಗಳ ನಿರ್ವಹಣೆಯನ್ನು ಪರಿಶೀಲಿಸಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿಯಿಂದ ತಪಾಸಣೆಯನ್ನು ನಡೆಸಲಾಗುತ್ತಿದೆ. ಆದರೆ ಸರ್ಕಾರದಿಂದ ಮಾನ್ಯತೆಯನ್ನು ಪಡೆಯದೆ ಸರ್ಕಾರದಿಂದ ಯಾವುದೇ ಅನುದಾನ ಪಡೆಯದೆ ನಡೆಸುತ್ತಿರುವ ಖಾಸಗಿ ವಿದ್ಯಾರ್ಥಿನಿಲಯಗಳ ನಿಯಂತ್ರಣಕ್ಕೆ ಯಾವುದೇ ನಿಯಮಾವಳಿಗಳು ಇರುವುದಿಲ್ಲ.

ಉ) ಹೌದು.

ಊ) ಬೆಂಗಳೂರು ನಗರ ಜಿಲ್ಲೆಯ ಸರ್ಕಾರಿ ವಿದ್ಯಾರ್ಥಿನಿಲಯಗಳಿಗೆ ರಾಜ್ಯ ಹಾಗೂ ಜಿಲ್ಲಾವಲಯಗಳಡಿ ಮೂಲಭೂತ ಸೌಲಭ್ಯಗಳಾದ ಹಾಸಿಗೆ, ಹೊದಿಗೆ, ಮಂಚ, ಟೇಬಲ್‌ಗಳು, ಟಿ.ವಿ. ಸೋಲಾರ್ ವಾಟರ್ ಹೀಟರ್, ಯು.ಪಿ.ಎಸ್. ಪಾತ್ರೆಗಳು, ಆಟದ ಸಾಮಗ್ರಿಗಳು ಇತ್ಯಾದಿಗಳನ್ನು ಅನುದಾನದ ಲಭ್ಯತೆಗೆ ಅನುಗುಣವಾಗಿ ಒದಗಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಈ ಬಾಬ್ತಿಗಾಗಿ ರೂ. 15.00 ಲಕ್ಷಗಳನ್ನು ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಆಯವ್ಯಯದಲ್ಲಿ ನಿಗದಿಗೊಳಿಸಿದ್ದು, ಅವಶ್ಯಕತೆ ಇರುವ ವಿದ್ಯಾರ್ಥಿನಿಲಯಗಳಿಗೆ ಮೂಲ ಸೌಕರ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಖಾಸಗಿ ಅನುದಾನಿತ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ನಿಯಮಾವಳಿಯಲ್ಲಿ ಅವಕಾಶವಿರುವುದಿಲ್ಲ. ಸಂಬಂಧಪಟ್ಟ ಸಂಸ್ಥೆಯೇ ಭರಿಸಬೇಕಾಗುತ್ತದೆ.

564 (901) ಶ್ರೀ ಪಾಟೀಲ್ ಬಿ.ಸಿ. (ಹಿರೇಕೆರೂರು) : ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹಿರೇಕೆರೂರು ತಾಲ್ಲೂಕಿನ ಪಶುಸಂಗೋಪನಾ ಆಸ್ಪತ್ರೆಗಳಲ್ಲಿರುವ ವೈದ್ಯರ ಸಂಖ್ಯೆ ಎಷ್ಟು;

ಆ) ಆ ಪೈಕಿ ಖಾಲಿ ಇರುವ ವೈದ್ಯರ ಹುದ್ದೆಗಳು ಎಷ್ಟು;

ಇ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ತುಂಬುವೆ ವಿಚಾರ ಸರ್ಕಾರದ ಮುಂದಿದೆಯೇ;

ಈ) ಹೊಸದಾಗಿ ಪಶುಸಂಗೋಪನಾ ಆಸ್ಪತ್ರೆ ಪ್ರಾರಂಭಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ರೇವುನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು) :

ಅ) ಹಿರೇಕೆರೂರು ತಾಲ್ಲೂಕಿನಲ್ಲಿ 2 ಸಹಾಯಕ ನಿರ್ದೇಶಕರ ಹುದ್ದೆ, 11 ಪಶುವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾಗಿದೆ. ಒಟ್ಟು 13 ಪಶುವೈದ್ಯಾಧಿಕಾರಿಗಳ ಮಂಜೂರಾದ ಹುದ್ದೆಗಳಿರುತ್ತವೆ.

ಆ) ಮಂಜೂರಾದ 13 ಹುದ್ದೆಗಳಲ್ಲಿ ಆರು ಪಶುವೈದ್ಯರ ಹುದ್ದೆಗಳು ಹಾಗೂ ಒಂದು ಸಹಾಯಕ ನಿರ್ದೇಶಕರ ಹುದ್ದೆ ಖಾಲಿ ಇರುತ್ತದೆ. ಒಂದು ಸಹಾಯಕ ನಿರ್ದೇಶಕರು ಮತ್ತು 5 ಪಶುವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಇ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ತುಂಬುವ ವಿಚಾರ ಸರ್ಕಾರದ ಮುಂದಿದೆ. 2006–07ನೇ ಸಾಲಿನಲ್ಲಿ ಒಟ್ಟು 236 ಹುದ್ದೆಗಳನ್ನು ನೇಮಿಸಿ ಆದೇಶ ನೀಡಿದ್ದು 187 ವೈದ್ಯರು ಸೇವೆಗೆ ಹಾಜರಾಗಿದ್ದಾರೆ. ಇದಲ್ಲದೆ ಪುನಃ ವೈದ್ಯರನ್ನು ನೇಮಿಸುವ ಪ್ರಕ್ರಿಯೆ ಪ್ರಾರಂಭಿಸಿದೆ.

ಈ) ರಾಷ್ಟ್ರೀಯ ಕೃಷಿ ಆಯೋಗದ ಶಿಫಾರಸ್ಸಿನಂತೆ ಪ್ರತಿ 5000 ಜಾನುವಾರುಗಳಿಗೆ ಘಟಕಗಳಿಗೆ ಒಂದು ಪಶುವೈದ್ಯ ಸಂಸ್ಥೆ ಇರಬೇಕಾಗುತ್ತದೆ.

ಪ್ರಾದೇಶಿಕ ಅಸಮತೋಲನೆ ನಿವಾರಣಾ ಸಮಿತಿಯ ಡಾ. ಡಿ.ಎಂ. ನಂಜುಂಡಪ್ಪರವರ ವರದಿಯ ಆಧಾರದ ಮೇಲೆ ಅತಿ ಹಿಂದುಳಿದ ತಾಲ್ಲೂಕುಗಳಲ್ಲಿ ಪ್ರತಿ 5000 ಜಾನುವಾರು ಘಟಕಗಳಿಗೆ ಒಂದು ಪಶುಚಿಕಿತ್ಸಾಲಯ ಇಲ್ಲದಿರುವ ಈ ಕೆಳಕಂಡ ಅತಿ ಹಿಂದುಳಿದ ತಾಲ್ಲೂಕುಗಳಲ್ಲಿ ಮಾತ್ರ 69 ಹೊಸ ಪಶುಚಿಕಿತ್ಸಾಲಯ ತೆರೆಯಲು ಉದ್ದೇಶಿಸಲಾಗಿದೆ.

ಕ್ರಮ ಸಂಖ್ಯೆ	ತಾಲ್ಲೂಕು	ಪಶುಚಿಕಿತ್ಸಾಲಯಗಳ ಸಂಖ್ಯೆ
1.	ಕೂಡ್ಲಗಿ	11
2.	ಸಂಡೂರು	4
3.	ಬಾಗೇಪಲ್ಲಿ	4
4.	ಬಸವಕಲ್ಯಾಣ	5
5.	ಔರಾದ್	3
6.	ಸುರಪುರ	4
7.	ಯಾದಗಿರ್	1

8.	ಶಹಾಪುರ	5
9.	ಹೆಚ್.ಡಿ. ಕೋಟೆ	2
10.	ಸಿಂಧನೂರು	9
11.	ಮಾನ್ವಿ	7
12.	ಲಿಂಗಸಗೂರು	5
13.	ದೇವದುರ್ಗ	9
	ಒಟ್ಟು	**69**

ಹೊಸದಾಗಿ ಪ್ರಾರಂಭಿಸಲು ಇನ್ನು ಯಾವುದೇ ಕಾಲಮಿತಿ ನಿಗದಿಪಡಿಸಿರುವುದಿಲ್ಲ.

565 (686) ಶ್ರೀ ಪಾಟೀಲ್ ಡಿ.ಆರ್. (ಗದಗ್) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ; ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ರೈತ ಕುಟುಂಬಗಳಿಗೆ ನೀರಾವರಿ ಸೌಲಭ್ಯ ಒದಗಿಸುವಲ್ಲಿ ಕೊರೆಯಲಾಗುವ ಕೊಳವೆ ಬಾವಿಗಳ ಹಾಗೂ ಕೇಸಿಂಗ್ ಪೈಪ್‌ಗಳ ದರ ಕಳೆದ ಮೂರು ವರ್ಷಗಳಲ್ಲಿ ಎಷ್ಟಿತ್ತು; (ವರ್ಷವಾರು ವಿವರ ನೀಡುವುದು);

ಆ) ಪಂಚಾಯತ್ ರಾಜ್ ವ್ಯವಸ್ಥೆಯಡಿ ಕುಡಿಯುವ ನೀರಿಗಾಗಿ ಕೊರೆಯಲಾಗುವ ಕೊಳವೆ ಬಾವಿಗಳ ಹಾಗೂ ಕೇಸಿಂಗ್ ಪೈಪುಗಳು ದರಗಳಿಗಿಂತ ಹೆಚ್ಚಿದೆಯೇ; ಕಡಿಮೆ ಇದೆಯೇ; ವರ್ಷವಾರು ಮಾಹಿತಿ ನೀಡುವುದು);

ಇ) ಗಂಗಾ ಕಲ್ಯಾಣ ಯೋಜನೆಯಲ್ಲಿ ನೀರಾವರಿ ಸೌಲಭ್ಯದ ಕೊಳವೆ ಬಾವಿಗಳಿಗಾಗಿ ಕಳೆದ ಮೂರು ವರ್ಷಗಳಲ್ಲಿ ಮಾಡಲಾಗಿರುವ ಒಟ್ಟು ವೆಚ್ಚ ಎಷ್ಟು; (ವರ್ಷವಾರು ವಿವರ ನೀಡುವುದು)

ಈ) ಈ ದರ ಹೆಚ್ಚಿದಲ್ಲಿ ಅದನ್ನು ಕಡಿಮೆ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ;

ಉ) ಅದೇ ರೀತಿ ಮೋಟಾರ್ ಸ್ಟಾರ್ಟರ್ ಹಾಗೂ ಪೈಪುಗಳ ದರ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಕೊಡಲಾಗುವ ದರಕ್ಕಿಂತ ಹೆಚ್ಚಿದೆಯೇ; ಕಡಿಮೆ ಇದೆಯೇ; ಇದನ್ನು ಇನ್ನಷ್ಟು ಕಡಿಮೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) :

ಅ) **ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ**

ಅನುಬಂಧ-1 (ಎ) ರಲ್ಲಿ ವಿವರಗಳನ್ನು ನೀಡಲಾಗಿದೆ.

ಡಿ. ದೇವರಾಜ ಅರಸು ಹಿಂದುಳಿದ ಅಭಿವೃದ್ಧಿ ನಿಗಮ ನಿಯಮಿತ

ಗಂಗಾ ಕಲ್ಯಾಣ ಯೋಜನೆಯಲ್ಲಿ ಕೊಳವೆ ಬಾವಿ ಕೊರೆಯಲು ಹಾಗೂ ಕೇಸಿಂಗ್ ಪೈಪ್ ಅಳವಡಿಸಲು ಕಳೆದ ಮೂರು ವರ್ಷಗಳಲ್ಲಿ ನಿಗಮದಿಂದ ನಿಗದಿಪಡಿಸಿದ ದರಗಳ ಪಟ್ಟಿಯನ್ನು ಅನುಬಂಧ-2ರಲ್ಲಿ ಲಗತ್ತಿಸಿದೆ.